ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,

ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-01.

ಸಂಖ್ಯೆ: ಸಿ3(7) ಪ್ರಾ.ಶಿ ವರ್ಗ: 01/2016-17 ದಿನಾಂಕ: 01-08-2016

: ಜ್ಞಾಪನ :

ವಿಷಯ:-2016-17ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ ಮಾರ್ಗಸೂಚಿಗಳು

ಉಲ್ಲೇಖ : ಕೆಳಗಿನಂತೆ ವಿವಿಧ ದಿನಾಂಕಗಳ ಸರ್ಕಾರದ ಆದೇಶಗಳು ಮತ್ತು ಇಲಾಖಾ ಸುತ್ತೋಲೆಗಳು

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 1 ಶಾಸನ 2007 ದಿ:01.09.2007
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿ:15.10.2007
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 173 ಇಟಿಆರ್ 2007 ದಿ:14.11.2007
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಇಟಿಆರ್ 2009 ದಿ:23.04.2011.
5. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ.11 ಶಾಸನ 2015, ದಿ.13.05.2015
6. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 41 ಶಾಸನ 2015 ದಿ: 13.08.2015.
7. ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ, ನಿಯಮಾವಳಿಗಳು.
8. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿ3(2) ಪ್ರಾ.ಶಿ/ಇತರೆ ಸುತ್ತೋಲೆ/2016-17 ದಿನಾಂಕ: 02-07-2016, 09-07-2016, 14-07-2016, 18-07-2016, 19/07/16, 29/07/16
9. ಸರ್ಕಾರದ ಆದೇಶ ಸಂಖ್ಯೆ: ಇಡಿ 06 ಪಿಬಿಎಸ್ 2016 ದಿನಾಂಕ: 04-07-2016.

-----*****-----

**ಪೀಠಿಕೆ** : ಸರ್ಕಾರದ ಉದ್ದೇಶ ಎಲ್ಲ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುವುದಾಗಿರುತ್ತದೆ. ಅದರಲ್ಲಿಯೂ ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿನ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ಉದ್ದೇಶದ ಈಡೇರಿಕೆಗೆ ಸರ್ಕಾರದಿಂದ ಅನೇಕ ಪ್ರಕ್ರಿಯೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರ ಹುದ್ದೆಗಳನ್ನು ನಿಗದಿಪಡಿಸಿ, ಅದರಲ್ಲಿಯೂ ಗ್ರಾಮೀಣ ಶಾಲೆಗಳಿಗೆ ಅಗತ್ಯತೆಗೆ ಅನುಗುಣವಾಗಿ ಶಿಕ್ಷಕರನ್ನು ಒದಗಿಸುವುದು ಮುಖ್ಯ ಉದ್ದೇಶವಾಗಿದೆ.

"ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮಗಳು-2007"ರ ಕಾಯಿದೆಯ ಆಶಯದಂತೆ ಶಿಕ್ಷಕರ ವರ್ಗಾವಣೆಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿನ ಶಾಲೆಗಳಲ್ಲಿ ಶಿಕ್ಷಕರು ಲಭ್ಯವಾಗುವಂತೆ ಮಾಡುವುದಕ್ಕಾಗಿ ಉಪಬಂಧ ಕಲ್ಪಿಸಲು, ಸದರಿ ವರ್ಗಾವಣೆ ಅಧಿನಿಯಮವನ್ನು ರೂಪಿಸಲಾಗಿದೆ ಎಂಬುದಾಗಿ ಅಧಿನಿಯಮದಲ್ಲಿಯೇ ಸ್ಪಷ್ಟವಿದೆ.

ಹಾಗೆಯೇ, "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ"ಯ ಪರಿಶಿಷ್ಟದಲ್ಲಿ ನೀಡಲಾಗಿರುವ ಶಾಲೆಯ ಕುರಿತಾದ "ಮಾನದಂಡ ನಿಯಮಗಳು ಮತ್ತು ಮಾನಕ ಮಾದರಿ" (ನಾರ್ಮ್ಸ್ ಅಂಡ್ ಸ್ಟ್ಯಾಂಡರ್ಡ್ಸ್) ಪ್ರಕಾರ ಅಗತ್ಯ ಸಂಖ್ಯೆಯಲ್ಲಿ ಶಿಕ್ಷಕರನ್ನು ಪ್ರತಿ ಶಾಲೆಗೆ ಒದಗಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ, "ಶಿಕ್ಷಣ ಹಕ್ಕು ಕಾಯಿದೆ"ಯಲ್ಲಿ ದಾಖಲಾತಿಗೆ ಅನುಗುಣವಾಗಿ ಪರಿಷ್ಕೃತ ಸಮರ್ಪಕ ಮಂಜೂರಾತಿ ಹುದ್ದೆಗಳನ್ನು ಗುರುತಿಸಲಾಗಿದೆ. ತಂತ್ರಾಂಶದ ಮೂಲಕ ಈಗಾಗಲೇ ಶಿಕ್ಷಕರ ಸಂಪನ್ಮೂಲದ ಸಮರ್ಪಕ ಬಳಕೆ ಮತ್ತು ಸ್ಥಳ ನಿಯುಕ್ತಿ (ರ್‍ಯಾಷನಲೈಸೇಷನ್ ಅಂಡ್ ರೀ-ಡಿಪ್ಲಾಯ್‌ಮೆಂಟ್ ಆಫ್ ಟೀಚರ್ಸ್) ಕ್ರಮಗಳನ್ನು ಕೈಗೊಂಡು, ಪ್ರತಿ ಶಾಲೆಗೆ ಪರಿಷ್ಕೃತ ಮಂಜೂರಾದ ಹುದ್ದೆಗಳನ್ನು ನಿಗದಿಪಡಿಸಲಾಗಿದೆ.

ಇದೀಗ, "ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮಗಳು-2007" ರ ನಿಯಮಗಳಂತೆ ವರ್ಗಾವಣೆಗಳಿಗೆ ಅವಕಾಶ ಕಲ್ಪಿಸಲು ಈ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

## ವರ್ಗಾವಣೆ ಮಾರ್ಗಸೂಚಿಗಳು:

ಉಲ್ಲೇಖ-1ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ಜಾರಿಗೆ ಬಂದಿರುತ್ತದೆ.ಇದರ ಅನ್ವಯ ಉಲ್ಲೇಖ-2ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ನ್ನು ರೂಪಿಸಲಾಗಿದೆ. ಉಲ್ಲೇಖ-3ರ ಸರ್ಕಾರದ ಅಧಿಸೂಚನೆ

ಸಂಖ್ಯೆ: ಇಡಿ.173.ಇ.ಟಿ.ಆರ್.2007 ದಿನಾಂಕ: 14.11.2007 ರಲ್ಲಿ ಎ, ಬಿ, ಸಿ, ವಲಯದ ವರ್ಗೀಕರಣದ ಪ್ರದೇಶ ಹಾಗೂ ವ್ಯಾಪ್ತಿಯನ್ನು ಅಧಿಸೂಚಿಸಲಾಗಿದೆ. ಉಲ್ಲೇಖ-4ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ತಿದ್ದುಪಡಿ ನಿಯಮಗಳು 2011ನ್ನು ಹೊರಡಿಸಲಾಗಿದೆ. ಉಲ್ಲೇಖ(5) ಹಾಗು (6)ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ)(ತಿದ್ದುಪಡಿ) ಅಧಿನಿಯಮ-2015ನ್ನು ಹೊರಡಿಸಲಾಗಿದೆ. ಹಾಗೂ ಉಲ್ಲೇಖ(9) ರಲ್ಲಿ ನಿಯಮಾನುಸಾರ ಶಿಕ್ಷಕರುಗಳ ವರ್ಗಾವಣೆಯನ್ನು ನಡೆಸಲು ಸರ್ಕಾರವು ಅನುಮತಿಯನ್ನು ನೀಡಿರುತ್ತದೆ.

ಇದೇ ವಿಷಯದಲ್ಲಿ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ"ಯ ಕ್ರಮಗಳನ್ನು ಆಧಾರವಾಗಿಟ್ಟುಕೊಂಡು,

- ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣೆ ಕುರಿತಂತೆ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ" ನಿಯಮಗಳ ಹಿನ್ನೆಲೆಯಲ್ಲಿ, ಹಿಂದಿನ ದಿನಾಂಕಗಳಲ್ಲಿ 2016-17 ನೇ ಶೈಕ್ಷಣಿಕ ಸಾಲಿಗೆ ಸಂಬಂಧಪಟ್ಟಂತೆ ಹೆಚ್ಚುವರಿ ಶಿಕ್ಷಕರ ಸ್ಥಳ-ನಿಯುಕ್ತಿ ಕ್ರಮಗಳ ಸಂದರ್ಭದಲ್ಲಿ ಹೊರಡಿಸಲಾದ ಸುತ್ತೋಲೆಗಳ ಪ್ರಕಾರ, ಪ್ರತಿ ಶಾಲೆಯಲ್ಲಿ ನಿಗದಿಪಡಿಸಿರುವ ಶಿಕ್ಷಕರ ಸಂಖ್ಯೆಯಿಂದ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆಯನ್ನು ಕಳೆದಾಗ ಬರುವ ಹುದ್ದೆಗಳನ್ನು ಖಾಲಿ ಹುದ್ದೆಗಳೆಂದು ಪರಿಗಣಿಸಲಾಗುವುದು.

  **<u>ಉದಾಹರಣೆಗೆ</u> : ಯಾವುದೇ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ,**

  | | |
  |---|---|
  | **ಮೂಲದಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ** | **: 08 ಇದ್ದಲ್ಲಿ** |
  | **ಪರಿಷ್ಕೃತ ಸಮರ್ಪಕ ಮಂಜೂರಾತಿ ಹುದ್ದೆಗಳ ಸಂಖ್ಯೆ** | **: 06 ಆದಾಗ** |
  | **ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ** | **: 05 ಇದ್ದಲ್ಲಿ** |
  | **ಆಗ, ಖಾಲಿ ಹುದ್ದೆ ಎಂದರೆ** | **: ಕೇವಲ 01 ಹುದ್ದೆ. 03 ಹುದ್ದೆಗಳಲ್ಲ** |

- ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಗುರುತಿಸುವಾಗ ವೃಂದವಾರು ಅಗತ್ಯ ಹುದ್ದೆಗಳನ್ನು ಗುರುತಿಸತಕ್ಕದ್ದು. ಹಾಗೂ, ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಗುರುತಿಸುವಾಗ ವಿಷಯವಾರು ಹುದ್ದೆಗಳಿರುವಂತೆ ಅಗತ್ಯತೆ ಗಮನಿಸಿ ಗುರುತಿಸಬೇಕಾಗುತ್ತದೆ. ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಒಂದು ವಿಭಾಗಕ್ಕಿಂತ ಹೆಚ್ಚುವರಿ ವಿಭಾಗಗಳು ಇರುವ ಸಂದರ್ಭದಲ್ಲಿ ಮಾತ್ರ ಒಂದೇ ವಿಷಯದ ಒಂದಕ್ಕಿಂತ ಹೆಚ್ಚು ಶಿಕ್ಷಕರ ಹುದ್ದೆಯನ್ನು ಗುರುತಿಸಬೇಕಾಗುತ್ತದೆ.

- "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ" ನಿಯಮಾನುಸಾರ ಈಗಾಗಲೇ ಆ ಜಿಲ್ಲೆಯ ಅವಶ್ಯಕತೆಗಿಂತ ಹೆಚ್ಚುವರಿ ಸಂಖ್ಯೆಯಲ್ಲಿ ಶಿಕ್ಷಕರಿರುವ ಜಿಲ್ಲೆಗಳನ್ನು ಗುರುತಿಸಲಾಗಿದ್ದು, ಅಂತಹ ಎಲ್ಲಾ ಜಿಲ್ಲೆಗಳಿಗೆ ಹೊರ ಜಿಲ್ಲೆಗಳಿಂದ ವರ್ಗಾವಣೆ ಹೊಂದಲು ಅವಕಾಶವಿರುವುದಿಲ್ಲ. ಆದರೆ, ಅಂತಹ ಜಿಲ್ಲೆಗಳಲ್ಲಿ ಅದೇ ಜಿಲ್ಲೆಯಲ್ಲಿನ ಇತರೆ ಖಾಲಿ ಹುದ್ದೆಗಳಿಗೆ ಆ ಜಿಲ್ಲೆಯೊಳಗಿನ ಶಿಕ್ಷಕರ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚುವರಿ ಸಂಖ್ಯೆಯಲ್ಲಿ ಶಿಕ್ಷಕರಿರುವ ಅಂತಹ ಜಿಲ್ಲೆಗಳ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗಿದೆ ಮತ್ತು ವರ್ಗಾವಣಾ ತಂತ್ರಾಂಶದಲ್ಲಿಯೂ ಲಭ್ಯ ಪಡಿಸಲಾಗಿದೆ. ಅಂತಹ ಹೆಚ್ಚುವರಿ ಶಿಕ್ಷಕರಿರುವ ಜಿಲ್ಲೆಗಳಿಂದ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ" ಪ್ರಕಾರ ಅವಶ್ಯಕತೆ ಇರುವ ಇತರೆ ಜಿಲ್ಲೆಗಳಿಗೆ ಶಿಕ್ಷಕರು ಬಯಸಿದಲ್ಲಿ ವರ್ಗಾವಣೆ ಹೊಂದಲು ಅವಕಾಶ ಕಲ್ಪಿಸಲಾಗಿದೆ. ಅಂತಹ ಹೆಚ್ಚುವರಿ ಶಿಕ್ಷಕರಿರುವ ಜಿಲ್ಲೆಗಳಿಂದ ಶಿಕ್ಷಕರ ಕೊರತೆ ಇರುವ ಜಿಲ್ಲೆಗಳಿಗೆ ವರ್ಗಾವಣೆ ನೀಡುವಾಗ, ಸಾಮಾನ್ಯ ಅಂತರ್ ಜಿಲ್ಲಾ ವರ್ಗಾವಣೆಗಳಿಗೆ ನಿಗದಿಪಡಿಸಿರುವ ಶೇಕಡ 3ರ ಪ್ರಮಾಣದ ಮಿತಿಗೆ ಒಳಪಡಬೇಕಾಗಿಲ್ಲ. .

- ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣೆ ಸಂದರ್ಭಕ್ಕೆ ಮಾತ್ರ ಅನ್ವಯವಾಗುವಂತೆ, ಎಲ್ಲ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದಕ್ಕೆ ಸಂಬಂಧಪಟ್ಟಂತೆ, 'ಜ್ಯೇಷ್ಠತಾ ಘಟಕ' ಎಂದರೆ ಆಯಾ ಜಿಲ್ಲೆ ಎಂಬುದಾಗಿ ಪರಿಗಣಿಸತಕ್ಕದ್ದು.

- ಈ ವರ್ಗಾವಣೆ ಪ್ರಕ್ರಿಯೆ ಮುಗಿದ ಕೂಡಲೇ ಮಕ್ಕಳ ಶಿಕ್ಷಣ ಹಕ್ಕು ಕಾಯಿದೆ ಮತ್ತು ನಿಯಮಗಳ ಪ್ರಕಾರ ಶಾಲೆಗೆ ಅಗತ್ಯವಿರುವ ಖಾಲಿ ಹುದ್ದೆಗಳ ಮಾಹಿತಿಯನ್ನು ತಂತ್ರಾಂಶದಿಂದ ನಿಖರವಾಗಿ ಪಡೆದು ಅತಿಥಿ ಶಿಕ್ಷಕರನ್ನು ಶಾಲಾವಾರು ಹಂಚಿಕೆ ಮಾಡಲು ಉಪನಿರ್ದೇಶಕರು ಹಾಗು ಕ್ಷೇತ್ರಶಿಕ್ಷಣಾಧಿಕಾರಿಗಳು ಕ್ರಮವಹಿಸತಕ್ಕದ್ದು. ಅತಿಥಿ ಶಿಕ್ಷಕರ ಸಂಖ್ಯೆ ಮತ್ತು ಸಂಬಂಧಿತ ಇತರೆ ವಿವರಗಳ ಕುರಿತು ಪ್ರತ್ಯೇಕವಾದ ಸುತ್ತೋಲೆಯನ್ನು ಹೊರಡಿಸಲಾಗುವುದು.

- ಪ್ರಸ್ತುತ ಸಾಲಿನಲ್ಲಿ ದಿನಾಂಕ 02/07/2016 ಹಾಗು ಸಂಬಂಧಪಟ್ಟ ಆದೇಶಗಳಿಗನುಗುಣವಾಗಿ ಹೆಚ್ಚುವರಿ ಎಂದು ಗುರುತಿಸಿರುವ ಶಿಕ್ಷಕರ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಮಾತ್ರ, ಯಾವ ಶಾಲೆಯಿಂದ ಹೆಚ್ಚುವರಿ ಎಂದು ಗುರುತಿಸಲ್ಪಟ್ಟಿರುವರೋ ಆ ಶಾಲೆಗೆ ಸೇರ್ಪಡೆಗೊಂಡ ದಿನಾಂಕದಿಂದ ಸೇವೆಯನ್ನು ಪರಿಗಣಿಸತಕ್ಕದ್ದು.

"ಮಕ್ಕಳ ಶಿಕ್ಷಣ ಹಕ್ಕು ಕಾಯಿದೆ ಮತ್ತು ನಿಯಮ''ಗಳು ಜಾರಿಗೆ ಬಂದ ನಂತರ ಗ್ರಾಮಾಂತರ ಪ್ರದೇಶಗಳನ್ನೂ ಒಳಗೊಂಡಂತೆ, ಉಲ್ಲೇಖ (8)ರಲ್ಲಿ ಕಾಣಿಸಿದಂತೆ ಹೆಚ್ಚುವರಿ ಶಿಕ್ಷಕರನ್ನು ಅಗತ್ಯವಿರುವ ಶಾಲೆಗಳಿಗೆ ಮರುಹೊಂದಾಣಿಕೆ ಕ್ರಮಗಳು ಜಾರಿಯಲ್ಲಿದ್ದು ಇದೀಗ ಆ ಪ್ರಕ್ರಿಯೆ ಮುಗಿದಿದ್ದು, ಈಗ ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸಲು ಉದ್ದೇಶಿಸಿ ಆಗಸ್ಟ್-ಅಕ್ಟೋಬರ್ ಮಾಹೆಯವರೆಗೆ ನಡೆಸಲು ತೀರ್ಮಾನಿಸಲಾಗಿದೆ.

**ವರ್ಗಾವಣೆ ಬಯಸುವವರು ಅರ್ಜಿಗಳನ್ನು On Line ಮೂಲಕ ಮಾತ್ರ ಸಲ್ಲಿಸಬೇಕಾಗಿರುತ್ತದೆ. ಖುದ್ದಾಗಿ ಅಥವಾ ಟಪಾಲು ಮೂಲಕ ಲಿಖಿತವಾಗಿ ಸಲ್ಲಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ** ಮತ್ತು ಪರಿಗಣಿಸಲಾಗುವುದಿಲ್ಲ. ವರ್ಗಾವಣೆ ಪ್ರಕ್ರಿಯೆಗೆ ವೇಳಾಪಟ್ಟಿಯನ್ನು ಈ ಕೆಳಗಿನಂತೆ ನಿಗದಿಪಡಿಸಿದೆ.

| ಕ್ರ.ಸಂ | ವಿವರ | ದಿನಾಂಕ | ಕ್ರಮ ವಹಿಸುವ ಅಧಿಕಾರಿಗಳು |
|---|---|---|---|
| 1. | ವರ್ಗಾವಣೆ ಬಯಸುವ ಸರ್ಕಾರಿ ಪ್ರಾಥಮಿಕ ಶಿಕ್ಷಕರ ವೃಂದದಿಂದ ಅರ್ಜಿಗಳನ್ನು ಕರೆಯಲು ಪ್ರಕಟಣೆ | 05-08-2016 | 1.ಆಯುಕ್ತರ ಕಛೇರಿ, ಬೆಂಗಳೂರು<br>2.ಅಪರ ಆಯುಕ್ತರ ಕಛೇರಿ, ಧಾರವಾಡ<br>3.ಅಪರ ಆಯುಕ್ತರ ಕಛೇರಿ, ಗುಲ್ಬರ್ಗಾ<br>4.ಉಪನಿರ್ದೇಶಕರು [ಆಡಳಿತ] (ಜಿಲ್ಲೆ)<br>5.ಕ್ಷೇತ್ರ ಶಿಕ್ಷಣಾಧಿಕಾರಿಗಳು, (ವಲಯ) |
| 2. | ವರ್ಗಾವಣೆ ಕೋರುವ ಸರ್ಕಾರಿ ಪ್ರಾಥಮಿಕ ಶಿಕ್ಷಕರ ವೃಂದ,ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಿರುವಂತೆ ಅಂತರ್ಜಾಲದ [on line] ಮೂಲಕ ಇಲಾಖೆ ನಿಗದಿ ಪಡಿಸಿರುವ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಅವಧಿ | 06-08-2016 ರಿಂದ 12-08-2016 | ವರ್ಗಾವಣೆ ಬಯಸುವ ಸರ್ಕಾರಿ ಪ್ರಾಥಮಿಕಶಾಲಾ ಶಿಕ್ಷಕರ ವೃಂದ |
| 3. | ಅರ್ಜಿ ಸಲ್ಲಿಸಿರುವ ಶಿಕ್ಷಕರು ಆಯಾ ಬ್ಲಾಕ್‌ನ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿಗೆ ಹಾಜರಾಗಿ ಅಗತ್ಯ ದಾಖಲೆಗಳನ್ನು ನೀಡಿ ವರ್ಗಾವಣೆ ಅರ್ಜಿ ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯಲು ನಿಗಧಿಪಡಿಸಿದ ಅವಧಿ | 06-08-2016 ರಿಂದ 14-08-2016 | ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿದ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ |
| 4 | ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಅಂತರ್ಜಾಲದ [on line] ಮೂಲಕ ಅರ್ಜಿಗಳ ಪರಿಶೀಲನೆ, ಮಾಹಿತಿ ದೃಢೀಕರಣ ಹಾಗು ಅರ್ಜಿ ಅನುಮೋದನೆಗೆ ನಿಗದಿ ಪಡಿಸಿದ ಅವಧಿ | 06-08-2016 ರಿಂದ 16-08-2016 | ಕ್ಷೇತ್ರ ಶಿಕ್ಷಣಾಧಿಕಾರಿಗಳು, ಆಯಾ ವಲಯ |
| 5 | ಪರಸ್ಪರ ವರ್ಗಾವಣೆ ಬಯಸಿರುವ ಶಿಕ್ಷಕರ ತಾತ್ಕಾಲಿಕ ಪಟ್ಟಿ **ಘಟಕದ ಒಳಗೆ ಮತ್ತು ಘಟಕದ ಹೊರಗೆ** ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು. | 19-08-2016 | 1. ಜಿಲ್ಲಾ ಉಪನಿರ್ದೇಶಕರು (ಆಡಳಿತ) (ಜಿಲ್ಲೆ)<br>2. ಆಯಾ ಆಯುಕ್ತಾಲಯದ ಜಂಟಿ ನಿರ್ದೇಶಕರು<br>3. ಸಂಬಂಧಿಸಿದ ನಿರ್ದೇಶಕರುಗಳು |
| 6 | ಕೋರಿಕೆ ವರ್ಗಾವಣೆ ಬಯಸಿರುವ ಶಿಕ್ಷಕರ ತಾತ್ಕಾಲಿಕ ಪಟ್ಟಿ **ಘಟಕದ ಒಳಗೆ ಮತ್ತು ಘಟಕದ ಹೊರಗೆ** ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು. | 21-08-2016 | 1. ಜಿಲ್ಲಾ ಉಪನಿರ್ದೇಶಕರು (ಆಡಳಿತ)<br>2. ಆಯಾ ಆಯುಕ್ತಾಲಯದ ಜಂಟಿನಿರ್ದೇಶಕರು<br>3. ಸಂಬಂಧಿಸಿದ ನಿರ್ದೇಶಕರುಗಳು |
| 7 | ಕ್ಷೇತ್ರಶಿಕ್ಷಣಾಧಿಕಾರಿಗಳು ರವರು ಅಭ್ಯರ್ಥಿಗಳಿಂದ ಪಡೆದ ಆದ್ಯತೆಯ ಮೂಲ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಉಪನಿರ್ದೇಶಕರಿಗೆ ಮುದ್ದಾಂ ಸಲ್ಲಿಸಬೇಕಾದ ದಿನಾಂಕ. **(ತಾತ್ಕಾಲಿಕ ಆದ್ಯತಾ ಪಟ್ಟಿಯಲ್ಲಿರುವ ಶಿಕ್ಷಕರುಗಳ ಅರ್ಜಿಗಳನ್ನು, ಆದ್ಯತಾ ಪಟ್ಟಿಗನುಸಾರ ಅದೇ ಕ್ರಮದಲ್ಲಿ ಮಾತ್ರ ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸುವುದು.)** | 23-8-2016 | 1. ಕ್ಷೇತ್ರಶಿಕ್ಷಣಾಧಿಕಾರಿಗಳು<br>2. ಜಿಲ್ಲಾ ಉಪನಿರ್ದೇಶಕರು [ಆಡಳಿತ] |

| | | | |
|---|---|---|---|
| 8 | ಉಪನಿರ್ದೇಶಕರು [ಆಡಳಿತ] ಕ್ಷೇತ್ರಶಿಕ್ಷಣಾಧಿಕಾರಿಗಳಿಂದ ಪಡೆದ ಆದ್ಯತೆಯ ಮೂಲ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ವರ್ಗಾವಣಾ ಪ್ರಾಧಿಕಾರಿಗಳಿಗೆ ಮುದ್ದಾಂ ಸಲ್ಲಿಸಬೇಕಾದ ದಿನಾಂಕ(**ತಾತ್ಕಾಲಿಕ ಆದ್ಯತಾ ಪಟ್ಟಿಯಲ್ಲಿರುವ ಶಿಕ್ಷಕರುಗಳ ಅರ್ಜಿಗಳನ್ನು ಮಾತ್ರ ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸುವುದು.**) | 25-8-2016 | 1. ಉಪನಿರ್ದೇಶಕರು [ಆಡಳಿತ]<br>2. ಕೇಂದ್ರ ಕಛೇರಿಗಳ ಮುಖ್ಯಸ್ಥರು |
| 9 | ಪರಸ್ಪರ ವರ್ಗಾವಣೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ರವರಿಗೆ ಸಲ್ಲಿಸಲು ನಿಗದಿಪಡಿಸಿದ ಅವಧಿ | 19-08-2016<br>ರಿಂದ<br>21-08-2016 | ಸಂಬಂಧಿಸಿದ ಶಿಕ್ಷಕರು |
| 10 | ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ರವರಿಗೆ ಸಲ್ಲಿಸಲು ನಿಗದಿಪಡಿಸಿದ ಅವಧಿ | 21-08-2016<br>ರಿಂದ<br>23-08-2016 | ಸಂಬಂಧಿಸಿದ ಶಿಕ್ಷಕರು |
| 11 | ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಆಕ್ಷೇಪಣೆಗಳನ್ನು ಪರಿಶೀಲಿಸಿದ ನಂತರ (**ಗಣಕಯಂತ್ರದಲ್ಲಿ ಅನುಮೋದಿಸಿ ಸಲ್ಲಿಸತಕ್ಕದು**) ಉಪನಿರ್ದೇಶಕರು (ಆಡಳಿತ) ಇವರಿಗೆ ಮುದ್ದಾಂ ಸಲ್ಲಿಸುವ ದಿನಾಂಕ | 25-08-2016<br>ರಿಂದ<br>28-08-2016 | 1. ಕ್ಷೇತ್ರಶಿಕ್ಷಣಾಧಿಕಾರಿಗಳು<br>2. ಜಿಲ್ಲಾ ಉಪನಿರ್ದೇಶಕರು (ಆಡಳಿತ) |
| 12 | ಕ್ಷೇತ್ರಶಿಕ್ಷಣಾಧಿಕಾರಿಗಳಿಂದ ಬಂದ ಆಕ್ಷೇಪಣೆಗಳನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ) ವರ್ಗಾವಣಾ ಪ್ರಾಧಿಕಾರಕ್ಕೆ ಮುದ್ದಾಂ ಸಲ್ಲಿಸುವುದು ಹಾಗೂ ಪರಿಶೀಲನೆ ದಿನಾಂಕ | 30-8-2016 | 1. ಜಿಲ್ಲಾ ಉಪನಿರ್ದೇಶಕರು (ಆಡಳಿತ)<br>2. ಸಂಬಂಧಿಸಿದ ನಿರ್ದೇಶಕರು |
| 13 | 1. ಪರಸ್ಪರ ವರ್ಗಾವಣೆ **ಅಂತಿಮ ಆದ್ಯತಾ ಪಟ್ಟಿ** ಪ್ರಕಟಣೆ<br>2. ಖಾಲಿ ಹುದ್ದೆಗಳ ಅಂತಿಮ ಪಟ್ಟಿ ಪ್ರಕಟಣೆ (ಸೂಚನಾ ಫಲಕ/ಇಲಾಖಾ ವೆಬ್‌ಸೈಟ್‌ನಲ್ಲಿ) | 06-09-2016 | 1. ಜಿಲ್ಲಾ ಉಪನಿರ್ದೇಶಕರು (ಆಡಳಿತ)<br>2. ಸಂಬಂಧಿಸಿದ ನಿರ್ದೇಶಕರು |
| 14 | ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್‌ಗೆ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ (ಘಟಕದ ಒಳಗೆ) | 09-9-2016 | ಸಂಬಂಧಿಸಿದ ಶಿಕ್ಷಕರ ವೃಂದ ಹಾಗೂ ಸಂಬಂಧಿಸಿದ ವರ್ಗಾವಣಾ ಪ್ರಾಧಿಕಾರ |
| 15. | 1. ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್‌ಗೆ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ (ಘಟಕದ ಹೊರಗೆ) | 14-09-2016 | 1. ನಿರ್ದೇಶಕರು(ಪ್ರಾಥಮಿಕ)ಆಯುಕ್ತರ ಕಛೇರಿ, ಬೆಂಗಳೂರು, ಮತ್ತು ನಿರ್ದೇಶಕರು (ಪ್ರೌಢ) ಮೈಸೂರು<br>2. ಅಪರ ಆಯುಕ್ತರ ಕಛೇರಿ, ನಿರ್ದೇಶಕರು ಧಾರವಾಡ,<br>3. ಅಪರ ಆಯುಕ್ತರ ಕಛೇರಿ, ನಿರ್ದೇಶಕರು ಕಲಬುರಗಿ. |
| 16. | ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ಘಟಕದ ಒಳಗೆ ಪ್ರಾಥಮಿಕ ಶಾಲಾ ಶಿಕ್ಷಕರ ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ **(Final list)** | 19-09-2016 | ಉಪನಿರ್ದೇಶಕರು(ಆಡಳಿತ) |
| 17. | ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದೊಳಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | 22-09-2016<br>ರಿಂದ<br>25-09-2016 | ಜಿಲ್ಲಾ ಉಪನಿರ್ದೇಶಕರು (ಆಡಳಿತ) |
| 18. | ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ಘಟಕದ ಹೊರಗೆ ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ **(Final list)** | 29-09-2016 | 1. ಆಯುಕ್ತರ ಕಛೇರಿ, ನಿರ್ದೇಶಕರು(ಪ್ರಾಥಮಿಕ) ಬೆಂಗಳೂರು ನಿರ್ದೇಶಕರು (ಪ್ರೌಢ) ಮತ್ತು ಮೈಸೂರು<br>2. ಅಪರ ಆಯುಕ್ತರ ಕಛೇರಿ ನಿರ್ದೇಶಕರು ಧಾರವಾಡ<br>3. ಅಪರ ಆಯುಕ್ತರ ಕಛೇರಿ ನಿರ್ದೇಶಕರು ಕಲಬುರಗಿ. |

| | | | |
|---|---|---|---|
| 19. | ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಹೊರಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | 01-10-2016 ರಿಂದ 07-10-2016 ಅಥವಾ ಪಟ್ಟಿಯಲ್ಲಿರುವಂತೆ ಮುಕ್ತಾಯದ ವರೆಗೆ | ಸಂಬಂಧಿಸಿದ ನಿರ್ದೇಶಕರು |

2016ನೇ ಆಗಸ್ಟ್-ಅಕ್ಟೋಬರ್ ಮಾಹೆಯಲ್ಲಿ ನಡೆಯುವ ಸಾಮಾನ್ಯ ವರ್ಗಾವಣೆಗೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ ಅಂತರ್ಜಾಲದ [On Line] ಮೂಲಕ ಅರ್ಜಿಗಳನ್ನು ಸಲ್ಲಿಸುವ/ಪರಿಶೀಲಿಸುವ ವಿಧಾನವನ್ನು ಈ ಕೆಳಗೆ ಪ್ಯಾರಾದಲ್ಲಿ ನೀಡಲಾಗಿದೆ.

ವರ್ಗಾವಣಾ ಅರ್ಜಿಗಳು:- ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ಬೆಂಗಳೂರು ದಿನಾಂಕ 15/10/2007ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ರ ನಿಯಮ 6 ರಂತೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ತತ್ಸಮಾನ ವೃಂದಕ್ಕೆ ಸಂಬಂಧಪಟ್ಟ ವರ್ಗಾವಣೆ ಅರ್ಜಿಗಳನ್ನು [1. ಜ್ಯೇಷ್ಠತಾ ಘಟಕದ ಒಳಗೆ/ಘಟಕದ ಹೊರಗೆ. 2. ಪರಸ್ಪರ] ನಿರ್ದಿಷ್ಟ ಪಡಿಸಿರುವ ಎರಡು ಅರ್ಜಿ ನಮೂನೆಗಳನ್ನು ಇಲಾಖೆಯ ವೆಬ್‌ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ.

## A. 2016 ನೇ ಸಾಲಿಗೆ ಅರ್ಜಿ ಸಲ್ಲಿಸುವ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದವರಿಗೆ ಸೂಚನೆಗಳು

1. **ಪರಸ್ಪರ ವರ್ಗಾವಣೆಗೆ On Line ನಲ್ಲಿ ಅರ್ಜಿ ಸಲ್ಲಿಸುವ ಕ್ರಮ ಮತ್ತು ಅರ್ಹತೆ**:-ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸುವವರು ಸಹ ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ On Lineನಲ್ಲಿ ಅರ್ಜಿ ಭರ್ತಿ ಮಾಡಬೇಕು.

- ✓ ಖಾಯಂ ಪೂರ್ವ ಸೇವಾ ಅವಧಿಯು ಘೋಷಣೆಯಾಗಿರಬೇಕು.
- ✓ ವರ್ಗಾವಣೆ ನಿಯಮ 15ರಡಿಯಲ್ಲಿ ಬಿಡುಗಡೆಯಾಗಿ ಸದರಿ ಶಾಲೆಗೆ ಬಂದ ಶಿಕ್ಷಕರು ಕನಿಷ್ಠ 3 ವರ್ಷ ಸೇವಾವಧಿ ಪೂರ್ಣಗೊಳಿಸಿರಬೇಕು. ಆದರೆ, ಪ್ರಸ್ತುತ ಸಾಲಿನಲ್ಲಿ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ನಿಯಮ"ಗಳಂತೆ ದಿನಾಂಕ 02/07/2016 ಹಾಗು ಸಂಬಂಧಪಟ್ಟ ಆದೇಶಗಳಿಗನುಗುಣವಾಗಿ ಹೆಚ್ಚುವರಿ ಎಂದು ಗುರುತಿಸಿರುವ ಶಿಕ್ಷಕರ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಮಾತ್ರ , ಯಾವ ಶಾಲೆಯಿಂದ ಹೆಚ್ಚುವರಿ ಎಂದು ಗುರುತಿಸಲ್ಪಟ್ಟಿರುವವರೋ ಆ ಶಾಲೆಗೆ ಸೇರ್ಪಡೆಗೊಂಡ ದಿನಾಂಕದಿಂದ ಸೇವೆಯನ್ನು ಪರಿಗಣಿಸತಕ್ಕದ್ದು.
- ✓ ಪರಸ್ಪರ ವರ್ಗಾವಣೆ ಬಯಸುವ ಇಬ್ಬರೂ ಶಿಕ್ಷಕರ ವೃಂದ ಮತ್ತು ವಿಷಯಗಳ ಹೊಂದಾಣಿಕೆ ಇರಬೇಕು.
- ✓ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳ ಒಳಗಡೆ ಎ ವಲಯದಿಂದ ಎ ವಲಯಕ್ಕೆ ಪರಸ್ಪರ ವರ್ಗಾವಣೆಗೆ ಅವಕಾಶವಿರುವುದಿಲ್ಲ.
- ✓ ಪರಸ್ಪರ ವರ್ಗಾವಣೆ ಬಯಸುವ ಶಿಕ್ಷಕರು ವರ್ಗಾವಣೆಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆ ದಿನಾಂಕಕ್ಕೆ ನಿವೃತ್ತಿ ಹೊಂದಲು ಕನಿಷ್ಠ (ಮೂರು) 03-ವರ್ಷಕ್ಕಿಂತ ಹೆಚ್ಚಿನ ಸೇವೆ ಹೊಂದಿರಬೇಕು ಹಾಗೂ 3-ವರ್ಷಕ್ಕಿಂತ ಕಡಿಮೆ ಅವಧಿ ಇರುವ ಶಿಕ್ಷಕರುಗಳು ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಪರಸ್ಪರ ವರ್ಗಾವಣೆಯ ಆತನ/ಆಕೆಯ ಸೇವಾವಧಿಯುಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಅನುಮತಿಸತಕ್ಕದ್ದಲ್ಲ. ಹಾಗೂ ಜೇಷ್ಠತೆಯ ರಕ್ಷಣೆಗೆ ಅರ್ಹರಾಗಿರತಕ್ಕದ್ದಲ್ಲ.
- ✓ ಒಂದೇ ಕ್ಲಸ್ಟರ್ [ಸಮೂಹ] ವ್ಯಾಪ್ತಿಯಲ್ಲಿ ಪರಸ್ಪರ ವರ್ಗಾವಣೆ ಪ್ರಕರಣ ಬಯಸಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ✓ ಪರಸ್ಪರ ವರ್ಗಾವಣೆ ಬಯಸುವ ಇಬ್ಬರೂ ಶಿಕ್ಷಕರಿಗೆ ಒಂದೇ ವರ್ಗಾವಣೆ ಅರ್ಜಿ ಇರುತ್ತದೆ. ಪರಸ್ಪರ ವರ್ಗಾವಣೆ ಬಯಸುವ ಶಿಕ್ಷಕರು ಪರಸ್ಪರ ವಿಚಾರ ವಿನಿಮಯ ಮಾಡಿಕೊಂಡು ಅಂತರ್ಜಾಲದಲ್ಲಿ ಯಾರು ಕ್ರಮ ಸಂಖ್ಯೆ 1 ರಲ್ಲಿ ವೈಯಕ್ತಿಕ ಮಾಹಿತಿ ಭರ್ತಿ ಮಾಡಬೇಕೆಂದು ನಿರ್ಧರಿಸಿಕೊಂಡು ಅವರ ವೈಯಕ್ತಿಕ ಮಾಹಿತಿಯನ್ನು ಕ್ರಮ ಸಂಖ್ಯೆ 1 ರಲ್ಲಿ ಭರ್ತಿ ಮಾಡುವುದು. ತದನಂತರ ಕ್ರಮ ಸಂಖ್ಯೆ 1 ರ ಶಿಕ್ಷಕರ ಅರ್ಜಿ ಸಂಖ್ಯೆಯನ್ನೇ ಬಳಸಿಕೊಂಡು ಕ್ರಮ ಸಂಖ್ಯೆ 2 ರಲ್ಲಿ ಸಂಬಂಧಿಸಿದ ಎರಡನೇ ಶಿಕ್ಷಕರು ಅವರ ವೈಯಕ್ತಿಕ ಮಾಹಿತಿಯನ್ನು ಭರ್ತಿ ಮಾಡುವುದು. ಹೀಗೆ ಭರ್ತಿ ಮಾಡಿದ ಮಾಹಿತಿಯನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಖುದ್ದಾಗಿ ಭೇಟಿ ನೀಡಿ ಅವರ ಅರ್ಜಿಯ ಮಾಹಿತಿ ಸರಿಯಾಗಿರುವುದನ್ನು ಖಚಿತಪಡಿಸಿಕೊಂಡು ಸ್ವೀಕೃತಿಯನ್ನು ಪಡೆಯುವುದು.
- ✓ ಪರಸ್ಪರ ವರ್ಗಾವಣೆ ಬಯಸುವ ಶಿಕ್ಷಕರು ಕೇವಲ ಒಬ್ಬರೊಂದಿಗೆ ಮಾತ್ರ ಪರಸ್ಪರ ವರ್ಗಾವಣಾ ಅರ್ಜಿ ಸಲ್ಲಿಸಬೇಕು. ಒಂದು ವೇಳೆ ಒಂದಕ್ಕಿಂತ ಹೆಚ್ಚು ಜನರೊಂದಿಗೆ ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸಿದಲ್ಲಿ ಅಂತಹ ಶಿಕ್ಷಕರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- ✓ ಪರಸ್ಪರ ವರ್ಗಾವಣೆ ಕೋರಿರುವ ಶಿಕ್ಷಕರು ನಿಗದಿತ ದಿನಾಂಕದಂದು ವರ್ಗಾವಣೆ ಅರ್ಜಿಯ ಕ್ರಮ ಸಂಖ್ಯೆ 1 ರ ಶಿಕ್ಷಕರ ವರ್ಗಾವಣೆ ಪ್ರಾಧಿಕಾರದ ಬಳಿ ಇಬ್ಬರೂ ಕೌನ್ಸೆಲಿಂಗ್‌ಗೆ ಹಾಜರಾಗಿ ವರ್ಗಾವಣಾ ಆದೇಶ ಪಡೆಯುವುದು.
- ✓ ಸರ್ವ ಶಿಕ್ಷಣ ಅಭಿಯಾನ ಯೋಜನೆ ಅಡಿಯಲ್ಲಿ ನೇಮಕವಾಗಿರುವ ಟಿ.ಜಿ.ಟಿ.ಗಳನ್ನು ಅದೇ ಯೋಜನೆ ಅಡಿಯಲ್ಲಿ ನೇಮಕಗೊಂಡಿರುವ ಟಿ.ಜಿ.ಟಿ.ಶಿಕ್ಷಕರುಗಳೊಂದಿಗೆ ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸ ಬಹುದು.
- ✓ ಇದೇ ರೀತಿ ಸರ್ವ ಶಿಕ್ಷಣ ಅಭಿಯಾನ ಯೋಜನೆಯ ಪ್ರಾಥಮಿಕ ಶಾಲಾ ಶಿಕ್ಷಕರು ಅದೇ ವಿಷಯದ ಸರ್ವ ಶಿಕ್ಷಣ ಅಭಿಯಾನ ಯೋಜನೆ ಶಿಕ್ಷಕರೊಂದಿಗೆ ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸಬಹುದು.
- ✓ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಶಾಲಾ ಶಿಕ್ಷಕರ ಮತ್ತು ಟಿ.ಜಿ.ಟಿ.ಶಿಕ್ಷಕರುಗಳ ಮೂಲ ವೇತನಕ್ಕಿಂತ ಕಡಿಮೆ ಅಥವಾ ಸಮಾನವಾದ ಮೂಲ ವೇತನ ಪಡೆಯುತ್ತಿರುವ ರಾಜ್ಯ ವಲಯದ ಶಿಕ್ಷಕರು ಪರಸ್ಪರ ವರ್ಗಾವಣೆಗೆ ಅರ್ಜಿ ಸಲ್ಲಿಸಿದಲ್ಲಿ ಪರಿಗಣಿಸಲಾಗುವುದು.
- ✓ ಅರ್ಜಿ ಸಲ್ಲಿಸಿದ ಎರಡು ದಿನಗಳ ಒಳಗಾಗಿ ಅಯಾ ಉಪನಿರ್ದೇಶಕರ ಕಛೇರಿಗಳಿಗೆ ಸೇವಾ ಮಾಹಿತಿ ಪರಿಶೀಲನೆಗೆ ಖುದ್ದಾಗಿ ಹಾಜರಾಗತಕ್ಕದ್ದು.

2. <u>**ಕೋರಿಕೆ ವರ್ಗಾವಣೆಗೆ On Line ನಲ್ಲಿ ಅರ್ಜಿ ಸಲ್ಲಿಸುವುದು:-**</u> ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರು ಕೋರಿಕೆ ಮೇಲೆ ವರ್ಗಾವಣೆಗೆ ಅರ್ಜಿ ಸಲ್ಲಿಸುವುದಾದಲ್ಲಿ ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ **On Line**ನಲ್ಲಿ ಮಾತ್ರ ಅರ್ಜಿಯನ್ನು ಭರ್ತಿ ಮಾಡಬೇಕು. ಮತ್ತು ನಿಗಧಿಪಡಿಸಿದ ದಿನಾಂಕದ ಒಳಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸೇವಾ ಮಾಹಿತಿ ಪರಿಶೀಲನೆಗೆ ಖುದ್ದಾಗಿ ಹಾಜರಾಗಿ ಸ್ವೀಕೃತಿ ಪಡೆಯತಕ್ಕದ್ದು.

- ✓ ಖಾಯಂ ಪೂರ್ವ ಸೇವಾ ಅವಧಿ ಪೂರೈಸದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
- ✓ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ರ 15ನೇ ನಿಯಮದಡಿಯಲ್ಲಿ ಬಿಡುಗಡೆಯಾದಂತಹ ಶಿಕ್ಷಕರು ಮುಂದಿನ ಮೂರು ವರ್ಷಗಳ ಅವಧಿಯವರೆಗೆ ವರ್ಗಾವಣೆಗೆ ಸಂಬಂಧಿಸಿದಂತೆ 11ನೇ ನಿಯಮದಡಿಯಲ್ಲಿ ಕೌನ್ಸಿಲಿಂಗ್‌ಗೆ ಅರ್ಹರಾಗಿರತಕ್ಕದ್ದಲ್ಲ.
- ✓ ಆದರೆ, ಪ್ರಸಕ್ತ ಸಾಲಿನಲ್ಲಿ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ನಿಯಮ"ಗಳಂತೆ ಹೆಚ್ಚುವರಿ ಎಂದು ಗುರುತಿಸಲ್ಪಟ್ಟು ಸ್ಥಳ-ನಿಯುಕ್ತಿಗೊಂಡಿರುವ ಶಿಕ್ಷಕರ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಮಾತ್ರ, ಯಾವ ಶಾಲೆಯಿಂದ ಹೆಚ್ಚುವರಿ ಎಂದು ಗುರುತಿಸಲ್ಪಟ್ಟಿರುವರೋ ಆ ಶಾಲೆಗೆ ಸೇರ್ಪಡೆಗೊಂಡ ದಿನಾಂಕದಿಂದ ಸೇವೆಯನ್ನು ಪರಿಗಣಿಸತಕ್ಕದ್ದು.
- ✓ ಕೇಂದ್ರ ಪ್ರಾಯೋಜಿತ ಸರ್ವ ಶಿಕ್ಷಣ ಅಭಿಯಾನ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು ರಾಜ್ಯ ವಲಯದ ಸಾಮಾನ್ಯ ಹುದ್ದೆಗೆ ವರ್ಗಾವಣೆ ಪಡೆಯಲು ಅವಕಾಶವಿಲ್ಲದ ಕಾರಣ ಯೋಜನೆಯನ್ನು ಕೇಂದ್ರ ಸರ್ಕಾರದ ಅನುದಾನದಡಿಯಲ್ಲಿ ನಡೆಸುತ್ತಿರುವುದರಿಂದ ಶಿಕ್ಷಕರು ಸರ್ವ ಶಿಕ್ಷಣ ಅಭಿಯಾನದ ಹುದ್ದೆಯಿಂದ ರಾಜ್ಯ ವಲಯದ ಸಾಮಾನ್ಯ ಹುದ್ದೆಗೆ ವರ್ಗಾವಣೆ ಹೊಂದಲು ಅವಕಾಶವಿಲ್ಲ.
- ✓ ಒಂದು ಜೇಷ್ಠತಾ ಘಟಕದಿಂದ ಮತ್ತೊಂದು ಜೇಷ್ಠತಾ ಘಟಕಕ್ಕೆ ವರ್ಗಾವಣೆ ಬಯಸಿರುವ ಶಿಕ್ಷಕರು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೇ ದಿನಾಂಕದಂದು ಇರುವಂತೆ 5 ವರ್ಷಗಳಿಗಿಂತ ಕಡಿಮೆ ಇಲ್ಲದ ಸೇವೆಯನ್ನು ಪೂರ್ಣಗೊಳಿಸಿರಬೇಕು. ಆದರೆ, ವಿವಾಹಿತ ಶಿಕ್ಷಕರ ಗಂಡ/ಹೆಂಡತಿ ಪ್ರಸ್ತುತ ಜೇಷ್ಠತಾ ಘಟಕದಲ್ಲಿ 3 ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವವರು, ವಿಧವಾ ಶಿಕ್ಷಕರು, ಅಂಗವಿಕಲ ಶಿಕ್ಷಕರು, ಹಾಗೂ ಸೈನಿಕ ಪ್ರಕರಣದಡಿ ಬರುವ ಶಿಕ್ಷಕರು, ಅರ್ಜಿ ಸಲ್ಲಿಸಲು ಅವಕಾಶವಿದೆ. ಹಾಗೆಯೇ, ಪ್ರಸಕ್ತ ಸಾಲಿನಲ್ಲಿ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ನಿಯಮ"ಗಳಂತೆ ಹೆಚ್ಚುವರಿ ಎಂದು ಗುರುತಿಸಲ್ಪಟ್ಟು ಸ್ಥಳ-ನಿಯುಕ್ತಿಗೊಂಡಿರುವ ಶಿಕ್ಷಕರ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಮಾತ್ರ, ಯಾವ ಶಾಲೆಯಿಂದ ಹೆಚ್ಚುವರಿ ಎಂದು ಗುರುತಿಸಲ್ಪಟ್ಟಿರುವರೋ ಆ ಶಾಲೆಗೆ ಸೇರ್ಪಡೆಗೊಂಡ ದಿನಾಂಕದಿಂದ ಸೇವೆಯನ್ನು ಪರಿಗಣಿಸತಕ್ಕದ್ದು.
- ✓ ಶಿಕ್ಷಕರು ಅಥವಾ ಅವರ / ಅವಳ ಗಂಡ / ಹೆಂಡತಿ ಅಥವಾ ಮಕ್ಕಳು ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಲ್ಲಿ ಅಂತಹವರ ವರ್ಗಾವಣೆಗೆ ಅವಕಾಶವಿದೆ.

3. <u>**ಆದ್ಯತೆ ಬಯಸಿ ಅರ್ಜಿ ಸಲ್ಲಿಸುವವರು:-**</u> ಆದ್ಯತೆ ಬಯಸಿ ಅರ್ಜಿ ಸಲ್ಲಿಸುವವರು, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ರ ಅನ್ವಯ ಹಾಗೂ ಅದರಡಿಯಲ್ಲಿ ರೂಪಿಸಲಾಗಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007, ಹಾಗೂ ತಿದ್ದುಪಡಿ ನಿಯಮಗಳು 2011 ರಂತೆ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪಡೆದು ಅರ್ಜಿ ಸಲ್ಲಿಸತಕ್ಕದ್ದು, ಮತ್ತು ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ನೀಡತಕ್ಕದ್ದು. ಆದ್ಯತಾ ಪ್ರಕರಣಗಳ ವಿವರ ಕೆಳಗಿನಂತಿರುತ್ತದೆ.

- ✓ <u>ಅತ್ಯಂತ ತೀವ್ರ ಕಾಯಿಲೆಯ ಪ್ರಕರಣಗಳು:–</u> ಅತ್ಯಂತ ತೀವ್ರತರವಾದ ಕಾಯಿಲೆಯ ಪ್ರಕರಣಗಳಲ್ಲಿ ಅಧಿನಿಯಮದ 6 [2] [4] ರಲ್ಲಿ ಸೂಚಿಸಿದಂತೆ ಶಿಕ್ಷಕರು ಅಥವಾ ಅವರ / ಅವಳ ಗಂಡ / ಹೆಂಡತಿ ಅಥವಾ ಮಕ್ಕಳು ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಲ್ಲಿ ನಿಯಮಾನುಸಾರ ಜಿಲ್ಲಾ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು. **ಹೃದಯ ಸಂಬಂಧಿ, ಕಿಡ್ನಿ, ಕ್ಯಾನ್ಸರ್, ಮತ್ತು ಹೆಚ್.ಐ.ವಿ.ಕಾಯಿಲೆಗಳಿಂದ ನರಳುತ್ತಿರುವವರಿಗೆ ಮಾತ್ರ ಈ ಪ್ರಕರಣದಡಿ ಅರ್ಜಿ ಸಲ್ಲಿಸಲು ಅವಕಾಶವಿದೆ. ಸುಳ್ಳು ಪ್ರಮಾಣಪತ್ರಗಳನ್ನು ಸಲ್ಲಿಸಿದಲ್ಲಿ ಯಾವುದೇ ಸೂಚನೆ ನೀಡದೇ ಅಂತಹಾ ಶಿಕ್ಷಕರ ವಿರುದ್ಧ ಶಿಸ್ತಿನ ಕ್ರಮ ಜರುಗಿಸಲಾಗುವುದು.ಪತಿ–ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ, ಯಾರಾದರೂ ಒಬ್ಬರು ಮಾತ್ರ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶವಿದೆ.<u>ಈ ಪ್ರಕರಣದ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಶಿಕ್ಷಕರು/ಅವಲಂಬಿತರನ್ನು ವಿಭಾಗೀಯ ಮಟ್ಟದಲ್ಲಿ ಪುನರ್ ವೈದ್ಯಕೀಯ ಪರಿಶೀಲನೆಗೆ ಒಳಪಡಿಸಲಾಗುವುದು.</u>**

- ✓ <u>ದೈಹಿಕ ಅಂಗವಿಕಲ ಪ್ರಕರಣಗಳು:–</u>ಅಂಗವಿಕಲತಾ ಮೀಸಲಾತಿಯಲ್ಲಿ ನೇಮಕಾತಿ ಹೊಂದಿರಬೇಕು ಹಾಗೂ ದೈಹಿಕ ಅಂಗವಿಕಲ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಶಸ್ತ್ರ ವೈದ್ಯರಿಂದ ಪ್ರಮಾಣೀಕರಿಸಲಾದಂತೆ ಶೇ.40% ಕ್ಕಿಂತ ಹೆಚ್ಚಿನ ಅಂಗವಿಕಲತೆ ಇರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು. ಸುಳ್ಳು ಪ್ರಮಾಣಪತ್ರಗಳನ್ನು ಸಲ್ಲಿಸಿದಲ್ಲಿ ಯಾವುದೇ ಸೂಚನೆ ನೀಡದೇ ಶಿಸ್ತಿನ ಕ್ರಮ ಜರುಗಿಸಲಾಗುವುದು.**<u>ಈ ಪ್ರಕರಣದ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಶಿಕ್ಷಕರನ್ನು ವಿಭಾಗೀಯ ಮಟ್ಟದಲ್ಲಿ ಪುನರ್ ವೈದ್ಯಕೀಯ ಪರಿಶೀಲನೆಗೆ ಒಳಪಡಿಸಲಾಗುವುದು.</u>**

- ✓ <u>ವಿಧವಾ ಶಿಕ್ಷಕರ ಪ್ರಕರಣಗಳು:–</u> ಪತಿಯ ಮರಣ ಪ್ರಮಾಣ ಪತ್ರ ಅಥವಾ ವಿಧವಾ ಪ್ರಕರಣಕ್ಕೆ ಸಂಬಂಧಿಸಿದಂತೆ ಇತರೆ ಯಾವುದಾದರು ಒಂದು ದಾಖಲೆಯನ್ನು ಹಾಜರುಪಡಿಸುವುದು.

- ✓ <u>ಸೈನಿಕ ಪ್ರಕರಣಗಳು:–</u> ಭಾರತೀಯ ರಕ್ಷಣಾ ಪಡೆ/ಅರೆ ಮಿಲಿಟರಿ ಪಡೆಗಳಲ್ಲಿ (ಕೇಂದ್ರ ಗೃಹ ಮಂತ್ರಾಲಯವು ಕರೆಯುವ ಯಾವುದೇ ಹೆಸರಿನ ಸೈನಿಕರು) ಕಾರ್ಯನಿರ್ವಹಿಸುತ್ತಿರುವ/ಮೃತರಾಗಿರುವ ಅವಲಂಬಿತರಿಗೆ ಒಂದು ಸಲದ ಕ್ರಮವಾಗಿ/ನಿವೃತ್ತರಾಗಿರುವ ಅವಲಂಬಿತರಿಗೆ ಒಂದು ಸಲದ ಕ್ರಮವಾಗಿ/ಶಾಶ್ವತ ಅಂಗವಿಕಲ ಸೈನಿಕರ ಪತಿ ಅಥವಾ ಪತ್ನಿ ರವರು, ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.

- ✓ <u>ವಿವಾಹಿತ ಶಿಕ್ಷಕರ ಪ್ರಕರಣ:–</u> ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) , ನಿಯಮಗಳು 2007ರ ನಿಯಮ 7 (1) (ಡಿ) ರಲ್ಲಿ ತಿಳಿಸಿರುವಂತೆ ಅಧಿನಿಯಮದ 6ನೇ ಪ್ರಕರಣದ (2)ನೇ ಉಪ ಪ್ರಕರಣದ (1)ನೇ ಖಂಡದ ಪ್ರಕಾರ ಅಗತ್ಯ ಪ್ರಮಾಣ ಪತ್ರ ಸಲ್ಲಿಸಿ ವಿವಾಹಿತ ಶಿಕ್ಷಕರ ಪ್ರಕರಣದಡಿ ಆದ್ಯತೆ ಕೋರತಕ್ಕದ್ದು. **ಗಂಡ ಹೆಂಡತಿ ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ ಮತ್ತು ಶಿಕ್ಷಕರು ಪ್ರಸ್ತುತ ಇರುವ ಜೇಷ್ಠತಾ ಘಟಕದಲ್ಲಿ ಕನಿಷ್ಠ–03 ವರ್ಷಗಳ ಸೇವೆಯನ್ನು ಸಲ್ಲಿಸಿದಲ್ಲಿ ಕೌನ್ಸಲಿಂಗ್ ಮೂಲಕ ಆತನ/ಆಕೆಯ, ಹೆಂಡತಿ/ಗಂಡ ಸೇವೆ ಸಲ್ಲಿಸುತ್ತಿರುವ ಸ್ಥಳಕ್ಕೆ ಅಥವಾ ಹತ್ತಿರದ ಸ್ಥಳಕ್ಕೆ ಸ್ಪಷ್ಟ ಖಾಲಿ ಸ್ಥಳದ ಲಭ್ಯತೆಯ ಆಧಾರದ ಮೇರೆಗೆ ಸೇವಾ ಅವಧಿಯಲ್ಲಿ ಎರಡು ಬಾರಿಗಿಂತ ಹೆಚ್ಚಲ್ಲದೆ ವರ್ಗಾವಣೆ ಮಾಡಲು ಅವಕಾಶವಿದೆ.**
- ✓ **ವಿವಾಹಿತ ಶಿಕ್ಷಕರ ಸಂದರ್ಭದಲ್ಲಿ ಈ ಮುಂದಿನ ಆದ್ಯತಾ ಕ್ರಮ ಇರತಕ್ಕದ್ದು ;**

  **ಎ) ಪತಿ ಅಥವಾ ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿರುವ ಪ್ರಕರಣಗಳು.**

  **ಬಿ)ಪತಿ ಅಥವಾ ಪತ್ನಿ , ಇಬ್ಬರಲ್ಲಿ ಒಬ್ಬರು ಸರ್ಕಾರಿ ನೌಕರರಾಗಿದ್ದು ಮತ್ತೊಬ್ಬರು ಅನುದಾನಿತ ಶೈಕ್ಷಣಿಕ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಕರಣಗಳು (ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಅನುದಾನಿತ ಸಂಸ್ಥೆಯ ನೌಕರರು ಎಂದರೆ ಸರ್ಕಾರದ ಅನುದಾನಿತ ಶೈಕ್ಷಣಿಕ ಸಂಸ್ಥೆಯ ಅನುದಾನಕ್ಕೊಳಪಟ್ಟ ಖಾಯಂ ನೌಕರು ಎಂಬುದಾಗಿ ತಿಳಿಯತಕ್ಕದ್ದು ಮತ್ತು ಈ ಕುರಿತಂತೆ ಅಗತ್ಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) (ಈ ಆದ್ಯತೆಯು ಕೇವಲ ಘಟಕದ ಹೊರಗಿನ ವರ್ಗಾವಣೆ ಕೋರಿಕೆಗೆ ಅನ್ವಯವಾಗುತ್ತದೆ) ಈ ಆದ್ಯತೆಯ ಶಿಕ್ಷಕರನ್ನು, ಆತನ/ಆಕೆಯ ಕೋರಿಕೆಯ ಮೇರೆಗೆ, ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ, ಜ್ಯೇಷ್ಠತೆ ಘಟಕದ ಹೊರಗೆ ಆತನ ಪತಿ/ಪತ್ನಿ ಕರ್ತವ್ಯನಿರ್ವಹಿಸುತ್ತಿರುವ ಅನುದಾನಿತ ಶೈಕ್ಷಣಿಕ ಸಂಸ್ಥೆಯಲ್ಲಿನ ಅಂತಹ ಸ್ಥಳ ಅಥವಾ ಹತ್ತಿರದಸ್ಥಳ ಅಥವಾ ಹುದ್ದೆಗೆ, ಆದರೆ ನಗರ ಪ್ರದೇಶವನ್ನು ಹೊರತುಪಡಿಸಿ, ವರ್ಗಾಯಿಸಬಹುದು)**

  **ಸಿ) ಪತಿ ಅಥವಾ ಪತ್ನಿ ಇಬ್ಬರಲ್ಲಿ ಒಬ್ಬರು ಸರ್ಕಾರಿ ನೌಕರರಾಗಿರದ ಪ್ರಕರಣಗಳು**

- ✓ **ಇತರೆ ಶಿಕ್ಷಕಿಯರು**
- ✓ <u>ಮನ್ನಣೆ ಪಡೆದ ರಾಜ್ಯ ಸರ್ಕಾರಿ ನೌಕರರ ಸಂಸ್ಥೆಗಳ ಚುನಾಯಿತ ಪದಾಧಿಕಾರಿಗಳು:–</u> ರಾಜ್ಯ ಸರ್ಕಾರದಿಂದ ಮನ್ನಣೆ ಪಡೆದ ಕರ್ನಾಟಕ ರಾಜ್ಯ ಸರ್ಕಾರಿ ಶಿಕ್ಷಕರ ಸಂಘ ಅಥವಾ ಕರ್ನಾಟಕ ಸರ್ಕಾರಿ ನೌಕರರ ಸಂಘದ ಚುನಾಯಿತ

ಪದಾಧಿಕಾರಿಯಾಗಿದ್ದಲ್ಲಿ ಸಂಘದವರಿಂದ ಪ್ರಮಾಣೀಕರಿಸಿರುವ ಪ್ರಮಾಣ ಪತ್ರಗಳನ್ನು ಪಡೆದು ಹಾಜರುಪಡಿಸುವುದು. ನಾಮ ನಿರ್ದೇಶನ ಮಾಡಿಕೊಂಡ ಪದಾಧಿಕಾರಿಗಳು ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ. **(ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ರ ನಿಯಮ 8(10) ರಲ್ಲಿನ ಅವಕಾಶದಂತೆ)**

- ✓ **ಇತರೆ ಶಿಕ್ಷಕರು**

**4. <u>ಆದ್ಯತಾ ಪಟ್ಟಿ ಸಿದ್ಧತೆ:</u>**

ಆದ್ಯತಾ ಪಟ್ಟಿಯನ್ನು ಕೆಳಕಂಡ ಆದ್ಯತಾ ಕ್ರಮದಲ್ಲಿ ಸಿದ್ಧಪಡಿಸಲಾಗುತ್ತದೆ.

- ✓ ಅತ್ಯಂತ ತೀವ್ರ ಖಾಯಿಲೆಯ ಶಿಕ್ಷಕರ ಪ್ರಕರಣಗಳು.
- ✓ ದೈಹಿಕ ಅಂಗವಿಕಲ ಶಿಕ್ಷಕರ ಪ್ರಕರಣಗಳು.
- ✓ ವಿಧವೆ ಶಿಕ್ಷಕಿಯರ ಪ್ರಕರಣಗಳು.
- ✓ ಸೈನಿಕರ ಪ್ರಕರಣಗಳು.
- ✓ ವಿವಾಹಿತ ಶಿಕ್ಷಕರ ಪ್ರಕರಣಗಳು.
- ✓ ಇತರೆ ಶಿಕ್ಷಕಿಯರು.
- ✓ ಮನ್ನಣೆ ಪಡೆದ ರಾಜ್ಯ ಸರ್ಕಾರಿ ನೌಕರರ ಸಂಸ್ಥೆಗಳ ಚುನಾಯಿತ ಪದಾಧಿಕಾರಿಗಳು.
- ✓ ಇತರ ಶಿಕ್ಷಕರು

5. **ಪರಸ್ಪರ ವರ್ಗಾವಣೆಗಳು ತೀವ್ರತರ ಖಾಯಿಲೆಯ ಪ್ರಕರಣಗಳು, ಹಾಗೂ ಅಂಗವಿಕಲ ಪ್ರಕರಣಗಳು, ವಿಧವಾ ಶಿಕ್ಷಕಿಯರ ಪ್ರಕರಣಗಳು, ಸೈನಿಕರ ಪ್ರಕರಣಗಳು, ಮಾನ್ಯತೆ ಪಡೆದ ಶಿಕ್ಷಕರ ಸಂಘದ ಚುನಾಯಿತ ಪ್ರತಿನಿಧಿಗಳ ವರ್ಗಾವಣೆಗಳನ್ನು ಹೊರತುಪಡಿಸಿ ಒಟ್ಟು ಕೋರಿಕೆ ಮೇರೆಗಿನ ಮತ್ತು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳ ಸಂಖ್ಯೆ ಆಯಾ ಜೇಷ್ಠತಾ ಘಟಕದ ಕೇಡರ್‌ನಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳ ಶೇ.5% ರಷ್ಟನ್ನು ಹಾಗೂ ಅಂತರ್ ಘಟಕೀಯ ಜೇಷ್ಠತಾ ವರ್ಗಾವಣೆಗಳ ಸಂದರ್ಭದಲ್ಲಿ ಶೇಕಡಾ 3% ರಷ್ಟನ್ನು, ಒಟ್ಟಾರೆ ಶೇ 8% ರಷ್ಟನ್ನು ಮೀರಬಾರದು.**

6. **<u>ಸಾಮಾನ್ಯ ಮಾಹಿತಿ</u>**

- ✓ **<u>ಇಲಾಖಾ ವೆಬ್ ಸೈಟ್‌ನಲ್ಲಿ ಮಾಹಿತಿ:-</u>** ವರ್ಗಾವಣಾ ವೇಳಾ ಪಟ್ಟಿಯಂತೆ ನಿಗದಿತ ಅವಧಿಯಲ್ಲಿ ಎಲ್ಲಾ ಕಾರ್ಯಗಳನ್ನು ನಿಯಮಾನುಸಾರ ನಡೆಸಬೇಕಾಗಿದ್ದು, ವರ್ಗಾವಣೆ ಬಗ್ಗೆ ಕಾಲಕಾಲಕ್ಕೆ ಹೆಚ್ಚಿನ ಮಾಹಿತಿ ಇತ್ಯಾದಿ ವಿಷಯದ ಬಗ್ಗೆ ಅಧಿಸೂಚನೆ/ಆದೇಶ/ಸುತ್ತೋಲೆಗಳನ್ನು ಹೊರಡಿಸಿದಲ್ಲಿ ಈ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಸಂಬಂಧಿಸಿದ ಶಿಕ್ಷಕರು ಪ್ರತಿದಿನ ಇಲಾಖಾ Website : www.schooleducation.kar.nic.in ನೋಡಿ ಮಾಹಿತಿ ಪಡೆದುಕೊಳ್ಳಲು ತಿಳಿಸಿದೆ.
- ✓ **<u>ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳು:</u>** ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಅದನ್ನು ಸಮರ್ಥಿಸುವ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಸಂಬಂಧಿಸಿದ ಬ್ಲಾಕ್‌ನ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ದೃಢೀಕರಿಸಿ ಸಲ್ಲಿಸತಕ್ಕದ್ದು. ವಿಳಂಭವಾಗಿ ಸಲ್ಲಿಸಿದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ, ಮುಂದೆ ಸಮಸ್ಯೆಗಳು ಉದ್ಭವಿಸಿದಲ್ಲಿ ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂಧಿಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು.

## <u>B. ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳು</u>

**ಖಾಲಿ ಹುದ್ದೆಗಳನ್ನು ಗುರುತಿಸುವ ವಿಧಾನ :**

- **ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣೆ ಕುರಿತಂತೆ "ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ" ನಿಯಮಗಳ ಹಿನ್ನೆಲೆಯಲ್ಲಿ, ಹಿಂದಿನ ದಿನಾಂಕಗಳಲ್ಲಿ 2016-17 ನೇ ಶೈಕ್ಷಣಿಕ ಸಾಲಿಗೆ ಸಂಬಂಧಪಟ್ಟಂತೆ ಹೆಚ್ಚುವರಿ ಶಿಕ್ಷಕರ ಸ್ಥಳ-ನಿಯುಕ್ತಿ ಕ್ರಮಗಳ ಸಂದರ್ಭದಲ್ಲಿ ಉಲ್ಲೇಖ 8ರಲ್ಲಿ ಹೊರಡಿಸಲಾದ ಸುತ್ತೋಲೆಗಳ ಪ್ರಕಾರ, ಪ್ರತಿ ಶಾಲೆಯಲ್ಲಿ ನಿಗಧಿಪಡಿಸಿಯುವ ಶಿಕ್ಷಕರ ಸಂಖ್ಯೆಯಿಂದ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆಯನ್ನು ಕಳೆದಾಗ ಬರುವ ಹುದ್ದೆಗಳನ್ನು ಖಾಲಿ**

**ಹುದ್ದೆಗಳೆಂದು ಪರಿಗಣಿಸತಕ್ಕದ್ದು. ಇದಕ್ಕೆ ಅನುಗುಣವಾಗಿ ವರ್ಗಾವಣಾ ತಂತ್ರಾಂಶದಲ್ಲಿ ಸೂಕ್ತವಾದ ಮಾಹಿತಿಯನ್ನು ಅಳವಡಿಸಲಾಗಿದೆ.**

- **ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಗುರುತಿಸುವಾಗ ವೃಂದವಾರು ಅಗತ್ಯ ಹುದ್ದೆಗಳು ಗುರುತಿಸತಕ್ಕದ್ದು. ಹಾಗು, ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಗುರುತಿಸುವಾಗ ವಿಷಯವಾರು ಹುದ್ದೆಗಳಿರುವಂತೆ ಅಗತ್ಯತೆ ಗಮನಿಸಿ ಗುರುತಿಸಬೇಕಾಗುತ್ತದೆ. ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಒಂದು ವಿಭಾಗಕ್ಕಿಂತ ಹೆಚ್ಚುವರಿ ವಿಭಾಗಗಳು ಇರುವ ಸಂದರ್ಭದಲ್ಲಿ ಮಾತ್ರ ಒಂದೇ ವಿಷಯದ ಒಂದಕ್ಕಿಂತ ಹೆಚ್ಚು ಶಿಕ್ಷಕರ ಹುದ್ದೆಯನ್ನು ಗುರುತಿಸಬೇಕಾಗುತ್ತದೆ.**

1. **ವರ್ಗಾವಣೆ ಅರ್ಜಿಗಳ ಪರಿಶೀಲನೆ:-** ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದವರು ಅಂತರ್ಜಾಲದ [On Line] ಮೂಲಕ ಸಲ್ಲಿಸಿದ ವರ್ಗಾವಣೆ ಅರ್ಜಿಗಳಲ್ಲಿನ ಸೇವಾ ವಿವರಗಳು [ಹೆಸರು, ಜನ್ಮ ದಿನಾಂಕ, ಪದನಾಮ, ಶಾಲಾ, ಕಾಲೇಜು, ಕಚೇರಿ ವಿಳಾಸ, ಪ್ರಸ್ತುತ ವೃಂದದಲ್ಲಿ ಸಲ್ಲಿಸಿರುವ ಎಲ್ಲಾ ಶಾಲೆಗಳ ಸೇವಾ ವಿವರ, ಬಯಸಿರುವ ಆದ್ಯತೆ, ಇತ್ಯಾದಿ] ಸರಿಯಿದೆಯೇ ಎಂಬುದನ್ನು ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಅರ್ಜಿ ಸಲ್ಲಿಸಿರುವ ಶಿಕ್ಷಕರ ಸೇವಾ ವಹಿಯನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳತಕ್ಕದ್ದು ಮತ್ತು ಅಭ್ಯರ್ಥಿ ಸಮ್ಮುಖದಲ್ಲಿ ಪ್ರಮಾಣೀಕರಿಸತಕ್ಕದ್ದು.

2. **ಪರಸ್ಪರ ವರ್ಗಾವಣೆಗೆ ಅರ್ಜಿಗಳ ಪರಿಶೀಲನೆ:-** ಪರಸ್ಪರ ವರ್ಗಾವಣೆಗೆ ಸಲ್ಲಿಸಿರುವ ಒಂದೇ ಅರ್ಜಿಯನ್ನು ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಶಿಕ್ಷಕರು-1 ಮತ್ತು ಶಿಕ್ಷಕರು-2ರ ಮಾಹಿತಿ ಸರಿ ಇದೆ ಎಂಬುದನ್ನು ಪರಿಶೀಲಿಸಿ ಸರಿ ಇದ್ದಲ್ಲಿ ಅನುಮೋದನೆ ನೀಡತಕ್ಕದ್ದು. ಇಬ್ಬರು ಅಧಿಕಾರಿಗಳು ಒಂದೇ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದರೆ ಶಿಕ್ಷಕರು-1ರ ಮಾಹಿತಿ ಸರಿ ಇದೆ ಎಂಬುದನ್ನು ಪರಿಶೀಲಿಸಿ ಅನುಮೋದನೆ ನೀಡತಕ್ಕದ್ದು.ಮತ್ತು ಶಿಕ್ಷಕರು-2ರ ಮಾಹಿತಿ ಸರಿ ಇದೆ ಎಂಬುದನ್ನು ಸಹ ಪರಿಶೀಲಿಸಿ ಅನುಮೋದನೆ ನೀಡತಕ್ಕದ್ದು.

03. **ಆಯಾ ವೃಂದದಲ್ಲಿ ಸಲ್ಲಿಸಿದ ಸೇವೆಯ ವೇಯ್ಟೇಜ್ ಬಗ್ಗೆ ಪರಿಶೀಲನೆ:-** ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿನಾಂಕ: 14.11.2007 ರಲ್ಲಿ ಅಧಿಸೂಚಿಸಲಾಗಿರುವ ಅನುಸಾರ ಎ, ಬಿ, ಸಿ ವಲಯಗಳ ಪ್ರಕಾರ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 37 ಇಟಿಆರ್ 2009, ದಿನಾಂಕ: 23.04.2011ರಲ್ಲಿ ನಿಯಮ 7 (2)ಕ್ಕೆ ಪ್ರತಿಯೋಜಿಸಿರುವಂತೆ ಪ್ರಸ್ತುತ ವೃಂದದಲ್ಲಿನ ಎಲ್ಲಾ ಸ್ಥಳಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಅರ್ಜಿ ಸಲ್ಲಿಸುವ ದಿನಾಂಕದವರೆಗೆ ಸರಿಯಾಗಿ ದಾಖಲು ಮಾಡಿದ್ದಾರೆಯೆ ಎಂಬ ಬಗ್ಗೆಯೂ ಸಹ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು On Line ನಲ್ಲಿ ಪರಿಶೀಲಿಸಿ ಪ್ರಮಾಣೀಕರಿಸತಕ್ಕದ್ದು.

04. **ವರ್ಗಾವಣೆ ಅರ್ಜಿಗಳ ಅನುಮೋದನೆ:-** ಇಲಾಖೆಯ On Line ನಲ್ಲಿ ದಾಖಲಾದ ಅರ್ಜಿಗಳನ್ನು ಪ್ರತಿದಿನ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಅವರಿಗೆ ನೀಡಿದ user ID ಮತ್ತು password ಗಳನ್ನು ಉಪಯೋಗಿಸಿ On Lineಗೆ ಪ್ರವೇಶ ಪಡೆದು ಅರ್ಜಿ ಸಲ್ಲಿಸಿರುವವರ ಸಮ್ಮುಖದಲ್ಲಿ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಬೇಕು. ಮಾಹಿತಿಗಳು ಸರಿ ಇವೆ ಎಂದು ಖಚಿತವಾದ ನಂತರ ಅಥವಾ ತಿದ್ದುಪಡಿ ಮಾಡಿದ ನಂತರ ಅರ್ಜಿಯನ್ನು ಅನುಮೋದಿಸಿ, ಅನುಮೋದಿತ ಅರ್ಜಿಯ ಪ್ರತಿಯನ್ನು ಮುದ್ರಿಸಿ ಸಹಿ ಮತ್ತು ಸೀಲು ಹಾಕಿ ದೃಢೀಕರಿಸಿ ಒಂದು ಪ್ರತಿಯನ್ನು ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಕಛೇರಿಯಲ್ಲಿ ರಕ್ಷಾ ಕಡತದಲ್ಲಿಡುವುದು. (ಆದ್ಯತೆಗೆ ಸಂಬಂಧಿಸಿದ ದಾಖಲೆಗಳ ಫೋಟೊ ಪ್ರತಿಯೊಂದಿಗೆ) ಹಾಗೂ ಅರ್ಜಿದಾರರಿಗೆ ಒಂದು ಪ್ರತಿಯನ್ನು ದೃಢೀಕರಿಸಿ ನೀಡುವುದು.

05. **ಆದ್ಯತಾ ಪ್ರಮಾಣ ಪತ್ರಗಳ ಪರಿಶೀಲನೆ:-** ಆದ್ಯತೆ ಬಯಸಿ ಅರ್ಜಿ ಸಲ್ಲಿಸಿರುವ ಶಿಕ್ಷಕರುಗಳ ಅರ್ಜಿಗಳನ್ನು ಸಕ್ಷಮ ಪ್ರಾಧಿಕಾರ ನೀಡಿರುವ ಮೂಲ ಪ್ರಮಾಣ ಪತ್ರಗಳೊಂದಿಗೆ ಪರಿಶೀಲಿಸಿ ಆದ್ಯತೆಗೆ ಅರ್ಹವಿದ್ದಲ್ಲಿ ಮಾತ್ರ ಆದ್ಯತೆಗೆ ಪರಿಗಣಿಸತಕ್ಕದ್ದು. ಇಲ್ಲವಾದಲ್ಲಿ ಇತರೆ ಶಿಕ್ಷಕಿ, ಅಥವಾ ಇತರೆ ಶಿಕ್ಷಕರ ಪ್ರಕರಣಗಳಲ್ಲಿ ಪರಿಗಣಿಸತಕ್ಕದ್ದು.

**06. ಅರ್ಜಿ ಹಾಗೂ ಆದ್ಯತಾ ಪ್ರಮಾಣ ಪತ್ರಗಳನ್ನು ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸುವುದು :-** ಉಪನಿರ್ದೇಶಕರು [ಆಡಳಿತ] ಅಭ್ಯರ್ಥಿಗಳ ಅರ್ಜಿ ಮತ್ತು ಆದ್ಯತೆಯ ಮೂಲ ಪ್ರಮಾಣ ಪತ್ರಗಳನ್ನು ಕ್ರೋಢೀಕರಿಸಿ ಕ್ರೋಢೀಕೃತ ಪಟ್ಟಿಯೊಂದಿಗೆ ಸಂಬಂಧಿಸಿದ ವರ್ಗಾವಣಾ ಪ್ರಾಧಿಕಾರಕ್ಕೆ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಲ್ಲಿಸತಕ್ಕದ್ದು. ಆದ್ಯತಾ ಪ್ರಕರಣಗಳಿಗೆ ಅನುಸಾರವಾಗಿ, ಜಿಲ್ಲೆಯ ಆಧ್ಯತಾ ಪಟ್ಟಿಯ ಜ್ಯೇಷ್ಠತೆಗೆ ಅನುಸಾರವಾಗಿ ಅರ್ಜಿಗಳನ್ನು ಪ್ರಕರಣಾವಾರು ವಿಂಗಡಿಸಿ, ಜೋಡಿಸಿ ಸಂಬಂಧಿಸಿದ ಪ್ರಾಧಿಕಾರಕ್ಕೆ ದೃಢೀಕರಿಸಿ ಸಲ್ಲಿಸತಕ್ಕದ್ದು.ಪ್ರತಿ ಅದ್ಯತಾ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿದ್ಧಪಡಿಸಿದ ಅರ್ಜಿಗಳ ಬಂಡಲ್‌ಗಳೊಂದಿಗೆ ಕೆಳಗಿನ ಮಾದರಿ ನಮೂನೆಯಲ್ಲಿ ಮುಖ ಚುಟ್ಟೆಯನ್ನು ಲಗತ್ತಿಸಿ ಸಲ್ಲಿಸತಕ್ಕದ್ದು.

**ಆದ್ಯತಾ ಪ್ರಕರಣ____________________ಗಳಿಗೆ ಸಂಬಂಧಪಟ್ಟ ಅರ್ಜಿಗಳು**

**ಜಿಲ್ಲೆಯ ಹೆಸರು :**

| ಕ್ರಮ ಸಂಖ್ಯೆ | ಅರ್ಜಿ ಕ್ರಮ ಸಂಖ್ಯೆ | ಶಿಕ್ಷಕರ ಹೆಸರು ಮತ್ತು ವಿಳಾಸ | ಷರಾ |
|---|---|---|---|
| | | | |

(ಉಪನಿರ್ದೇಶಕರ ಸಹಿ ಮೊಹರು ಸಹಿತ)

**07. ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳು:-** ಆದ್ಯತಾ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಬಂದಲ್ಲಿ ಸಮರ್ಥಿಸುವ ದಾಖಲೆಗಳೊಂದಿಗೆ ಪರಿಶೀಲಿಸಿ ಕ್ರೋಢೀಕೃತ ಮಾಹಿತಿಯನ್ನು ಸೂಕ್ತ ಷರಾ ಹಾಗೂ ದಾಖಲೆಗಳೊಂದಿಗೆ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ನಿಗಧಿತ ದಿನಾಂಕದೊಳಗೆ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಸಲ್ಲಿಸುವುದು ಹಾಗೂ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರು ಆಕ್ಷೇಪಣೆ ಕುರಿತಂತೆ ಪರಿಶೀಲಿಸಿ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಕ್ಷಮ ವರ್ಗಾವಣಾ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಯಾವುದೇ ಆಕ್ಷೇಪಣೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಸಲ್ಲಿಸತಕ್ಕದ್ದು.

**8. ಸಹಾಯವಾಣಿ:-** ಪ್ರಸಕ್ತ ಸಾಲಿನ ವರ್ಗಾವಣೆಗೆ ಸಂಬಂಧಿಸಿದಂತೆ, ಶಿಕ್ಷಕರಿಗೆ ಮಾಹಿತಿಯನ್ನು ನೀಡಲು ಉಪನಿರ್ದೇಶಕರ ಕಛೇರಿಗಳಲ್ಲಿ ಹಾಗು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಸಹಾಯವಾಣಿಯನ್ನು ಸ್ಥಾಪಿಸುವುದು ಹಾಗು ಸಹಾಯವಾಣಿಯಲ್ಲಿ ವಿಷಯವನ್ನರಿತ ಜವಾಬ್ದಾರಿಯುತ ಅಧಿಕಾರಿಗಳು/ನೌಕರರು ಉಪಸ್ಥಿತರಿದ್ದು, ಶಿಕ್ಷಕರುಗಳ ಸಂದೇಹ ನಿವಾರಿಸುವುದು. ಕೌನ್ಸಿಲಿಂಗ್ ದಿನಾಂಕಗಳು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ. ವೆಬ್‌ಸೈಟ್‌ನಲ್ಲಿ ಮಾಹಿತಿ ನೀಡಲಾಗುವುದು.

**11. ಇಲಾಖಾ ವೆಬ್ ಸೈಟ್‌ನಲ್ಲಿ ಮಾಹಿತಿ:-** ವರ್ಗಾವಣಾ ವೇಳಾ ಪಟ್ಟಿಯಂತೆ ನಿಗದಿತ ಅವಧಿಯಲ್ಲಿ ಎಲ್ಲಾ ಕಾರ್ಯಗಳನ್ನು ನಿಯಮಾನುಸಾರ ನಡೆಸಬೇಕಾಗಿದ್ದು, ವರ್ಗಾವಣೆ ಬಗ್ಗೆ ಕಾಲಕಾಲಕ್ಕೆ ಹೆಚ್ಚಿನ ಮಾಹಿತಿ ಇತ್ಯಾದಿ ವಿಷಯದ ಬಗ್ಗೆ ಅಧಿಸೂಚನೆ/ಆದೇಶ/ಸುತ್ತೋಲೆಗಳನ್ನು ಹೊರಡಿಸಿದಲ್ಲಿ ಈ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಸಂಬಂಧಿಸಿದ ಅಧಿಕಾರಿಗಳು ಪ್ರತಿದಿನ ಇಲಾಖಾ Web Site : www.schooleducation.kar.nic.in ಹಾಗೂ ಇ-ಮೇಲ್ ನೋಡಿ ಮಾಹಿತಿ ಪಡೆದುಕೊಂಡು ಅದರಂತೆ ಕ್ರಮವಹಿಸಲು ತಿಳಿಸಿದೆ ಹಾಗೂ ಈ ವರ್ಗಾವಣಾ ಪ್ರಕ್ರಿಯೆಯು ನಿಗಧಿತ ಕಾಲಮಿತಿಯೊಳಗೆ ಪೂರ್ಣಗೊಳ್ಳಬೇಕಾಗಿರುವುದರಿಂದ ಈ ಕೆಲಸವನ್ನು ಬಹಳ ಎಚ್ಚರಿಕೆಯಿಂದ ಯಾವುದೇ ಲೋಪಗಳಿಗೆ ಗೊಂದಲಗಳಿಗೆ ಆಸ್ಪದನೀಡದಂತೆ ಕ್ರಮ ವಹಿಸಲು ತಿಳಿಸಿದೆ.

(ಸಹಿ/- ಭಾ.ಆ.ಸೇ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,
ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ.

ಪ್ರತಿಯನ್ನು:-

1. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ವಂದನಾ ಪೂರ್ವಕವಾಗಿ ಸಲ್ಲಿಸಿದೆ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಜಂಟಿ ಆಯುಕ್ತರು(ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿ ಹಾಗು ಕ್ರಮಕ್ಕಾಗಿ
6. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ/ಧಾರವಾಡ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
9. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ವಿಭಾಗ.
10. ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ
11. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
12. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
13. ಮುಖ್ಯಸ್ಥರು, ಇ-ಗೌರ್ನೆನ್ಸ್, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-ಪ್ರಸಕ್ತ ವರ್ಗಾವಣೆಗಳಿಗೆ ಈಗಾಗಲೇ ಸಭೆಯಲ್ಲಿ ಸೂಚಿಸಿರುವಂತೆ ತ್ವರಿತವಾಗಿ "ತಂತ್ರಾಂಶವನ್ನು" ಸಜ್ಜುಗೊಳಿಸಿ ಅಗತ್ಯ ತಾಂತ್ರಿಕ ಸಹಕಾರವನ್ನು ಒದಗಿಸಲು ಮತ್ತುಸಂಬಂಧಿತ ತಂಡವನ್ನು ಅಗತ್ಯ ಕಾರ್ಯಗಳಿಗೆ ವೇಳಾಪಟ್ಟಿಯಂತೆ ನಿಯೋಜಿಸಲು ಮತ್ತು ಇತರೆ ಸಂಬಂಧಿತ ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ ಹಾಗು ಪ್ರಸ್ತುತದ ಜ್ಞಾಪನವನ್ನು ಇಲಾಖಾ ವೆಬ್-ಸೈಟ್ ನಲ್ಲಿ ಪ್ರಕಟಿಸಲು ಕ್ರಮಕೈಗೊಳ್ಳಲು ತಿಳಿಸಿದೆ.
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್).
15. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ.
16. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ
17. ಕಛೇರಿ ಪ್ರತಿ.

(ಸೌ[illegible] ಭಾ.ಆ.ಸೇ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು